ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-

1418 (1701) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಅನುದಾನ ರಹಿತ ಐ.ಟಿ.ಐ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಆ) ಸದರಿ ಅನುದಾನ ರಹಿತ ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ನಿಯಾಮಾವಳಿಗಳೇನು ; ಸದರಿ ನಿಯಮಗಳ ಅನ್ವಯ ಅನುದಾನ ರಹಿತ ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆಯೇ ;

(ಇ) ಪ್ರಸ್ತುತ ಯಾವ ವರ್ಷದವರೆಗೆ ಅನುದಾನ ರಹಿತ ಐ.ಟಿ.ಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆ; ನಿಗದಿಪಡಿಸಿದ ವರ್ಷದವರೆಗೆ ಎಲ್ಲಾ ಐ.ಟಿ.ಐ. ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆಯೇ ;

(ಈ) ಈ ಹಿಂದೆ ಅನುದಾನಕ್ಕೆ ಒಳಪಡಿಸುವ ಕುರಿತು ಸಂಪುಟ ಉಪ ಸಮಿತಿ ಮಾಡಿರುವ ಶಿಫಾರಸ್ಸುಗಳೇನು ? (ಸಂಪೂರ್ಣ ವಿವರ ನೀಡುವುದು)